**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ. ನರಸೀಪುರ**

**ಸಿ ಸಿ ಸಂಖ್ಯೆ: 336/2024**

**ದೋಷಾರೋಪಣೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ ನರಸೀಪುರ ಆದ ನಾನು

ಮಹೇಶ ಉಃ ಗುಡ್ಡಿ
ಬಿನ್ ಲೇ ನಾಗಶೆಟ್ಟಿ
27 ವರ್ಷ, ವಾಸಃ ಕಿರಗಸೂರು ಗ್ರಾಮ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಎನೆಂದರೆಃ-

ಮೊದಲನೆಯದಾಗಿ, ದಿನಾಂಕ 13.04.2024 ಬೆಳಗಿನ ಜಾವ 2.00 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೋಲಿಸ್ ಠಾಣಾ ವ್ಯಾಪ್ತಿಯ, ತಿ ನರಸೀಪುರ ತಾಲ್ಲೂಕಿನ ಕಿರಗಸೂರು ಗ್ರಾಮದ ಚಾಸಾ-1/ರಾಜಣ್ಣ ರವರ ಮನೆಯ ಮೇಲ್ಭಾಗದ ಹೆಂಚನ್ನು ಆರೋಪಿತರಾದ ನೀವು ತೆಗೆದು ಕಳ್ಳತನ ಮಾಡುವ ಉದ್ದೇಶದಿಂದ ಅವರ ಮನೆಗೆ ಅತಿಕ್ರಮ ಪ್ರವೇಶ ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 457 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೆಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಸದರಿ ಮನೆಯ ಬೀರುವಿನಲ್ಲಿಟ್ಟಿದ್ದ ರೂ.25,000/- ನಗದು ಮತ್ತು 7.9 ಗ್ರಾಂನ ಒಂದು ಚಿನ್ನದ ಉಂಗುರ ಕಳ್ಳತನ ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 380 ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

ದಿನಾಂಕಃ 25.04.2025.

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ, ತಿ. ನರಸೀಪುರ.**

**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ. ನರಸೀಪುರ.**

**ಸಿ ಸಿ ಸಂಖ್ಯೆ: 336/2024**

**ದೋಷಾರೋಪಣೆ**

ಮಹೇಶ ಉಃ ಗುಡ್ಡಿ
ಬಿನ್ ಲೇ ನಾಗಶೆಟ್ಟಿ
27 ವರ್ಷ, ವಾಸಃ ಕಿರಗಸೂರು ಗ್ರಾಮ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕಃ 25.04.2025.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ತಿ.ನರಸೀಪುರ.